## ಉಪ್ಪುಪ್ಪಿಟ್ಟು!

ಮುಂಜಾನೆ ಟಿಫಿನ್ನಿಗೆ ಅಂತ ಉಪ್ಪಿಟ್ಟು ಮಾಡಿದ್ಲು, ಅದೇ ಖಾರಭಾಥ್, ಉಪಮಾ ಅಂತಾರಲ್ಲ ಅದೇ ನಮ್ಮೂರಲ್ಲಿ ಉಪ್ಪಿಟ್ಟು. ನನಗೆ ಟೇಬಲ್ಲಿನ ಮೇಲೆ ಹಾಕಿಟ್ಟು ಸ್ನಾನಕ್ಕೆ ಹೋಗಿದ್ಲು, ಸ್ವಲ್ಪ ಸುಡು ಸುಡು ಬಿಸಿ ಇತ್ತು, ಆರಲಿ ಅಂತ ಕಾದು ಕೂತಿದ್ದೆ, ಸ್ನಾನ ಮುಗಿಸಿ, ನೀರು ಹೀರಲು ತಲೆಗೆ ಟವೆಲ್ಲು ಹಾಕಿ ತುರುಬು ಕಟ್ಟಿಕೊಳ್ಳುತ್ತ ಬಂದವಳು, ನನ್ನ ಮುಖದ ಮುಂದೆ ಕೈಯಾಡಿಸಿದಳು, ಡ್ರಾಪ್ ಕೇಳಲು ನಿಲ್ಲು ಅಂತ ಸೂಚಿಸುವರಂತೆ, "ಏನು ಧ್ಯಾನ ಮಾಡ್ತಾ ಇದೀರ, ಉಪ್ಪಿಟ್ಟು ಆರಿ ಹೋದರೆ ಏನು ಚೆನ್ನಾಗಿರ್ತದೆ ತಿನ್ನಿ" ಅಂದ್ಲು. "ಹೂಂ, ತಪಸ್ಸು ಮಾಡ್ತಾ ಇದ್ದೆ, ಊರ್ವಶಿ ಏನಾದರೂ ಪ್ರತ್ಯಕ್ಷ ಆಗ್ತಾಳೋ ಅಂತ" ಅಂದೆ, "ದೇವರು ಪ್ರತ್ಯಕ್ಷ ಆಗಲಿ ಅಂತ ಎಲ್ರೂ ತಪಸ್ಸು ಮಾಡಿದ್ರೆ ಊರ್ವಶಿಗಾಗಿ ತಪಸ್ಸು ಮಾಡೋರು ನೀವೆ ಅಂತ ಕಾಣ್ತದೆ, ಊರ್ವಶಿ ಎನೂ ಇಲ್ಲ... ನಿಮಗೆ ನಾನೇ ವಾಸಿ" ಅಂತ ಬುದ್ಧಿ ಹೇಳಿದಳು, ಬುದ್ಧಿ ಬಂತೋ ಇಲ್ವೊ ಗೊತ್ತಿಲ್ಲ, ಆ ಕಡೆ ನಡೆದಿದ್ದವಳ ಕೈ ಹಿಡಿದೆಳೆದು, ಯಾವಾಗಿನಂತೆ, ಆ ಕೇಶರಾಶಿಯ ಸುವಾಸನೆ ಎಳೆದು ಬಿಟ್ಟುಕೊಟ್ಟೆ, ಆಗ ತಾನೆ ಮಜ್ಜನಗೈದ ಮುಡಿಯ ಪರಿಮಳ ಮುದ ಕೊಡುತ್ತದೆ, ಕೈಸೆರೆ ಬಿಡಿಸಿಕೊಂಡು, ಧ್ಯಾನ ಮಾಡುತ್ತ ಪೂಜೆ ಮಾಡಲು ಹೊರಟಳು. ಇತ್ತ ಉಪ್ಪಿಟ್ಟು, "ನಿನ್ನ ಊರ್ವಶಿಯೊಂದಿಗಿನ ಸರಸ ಸಾಕು, ವಸಿ ನನ್ನ ಪರಿಮಳವೂ ನೋಡು" ಅಂತ ಬಿಸಿ ಉಗಿ(ಆವಿ) ಬಿಟ್ಟಿತು. ಒಂದು ತುತ್ತು ಊದಿ ಆರಿಸಿ ಬಾಯಿಗಿಟ್ಟೆ, ಉಪ್ಪಿಟ್ಟು ಉಪ್ಪುಪ್ಪಾಗಿತ್ತು.

ತುತ್ತು ತಿಂದವನು, ಇಂಗು ತಿಂದ ಮಂಗನಂತೆ ಮುಖ ಮಾಡಿಕೊಂಡು ಕೂತೆ, ಇನ್ನೂ ಪ್ಲೇಟು ತುಂಬ ಉಪ್ಪಿಟ್ಟು ಇತ್ತು, **"ನಿನ್ನ ನಲ್ಲೆಯ ಸಿಹಿ ಮುತ್ತುಗಳೇ ಬೇಕೇ ನಿಂಗೆ, ತಿನ್ನು ಉಪ್ಪು ಉಪ್ಪು ಉಪ್ಪಿಟ್ಟು" ಅಂತ ಅಣಕಿಸುತ್ತಿತ್ತು**. ಅಗರಬತ್ತಿಯ ಪರಿಮಳ ಸೂಸುತ್ತ ಹೊರಬಂದಳು, ನನ್ನ ಮುಖ ನೋಡಿ ಮಂತ್ರ ಪಟಿಸುತ್ತಲೇ, ಏನು ಅನ್ನುವಂತೆ ಹುಬ್ಬು ಮೇಲೇರಿಸಿದಳು, "ಉಪ್ಪಿಟ್ಟೊ ಅಂತ ಗೊತ್ತು... ಆದ್ರೆ, ಎನೂ ಇಲ್ಲ ಉಪ್ಪು ಬಿಟ್ಟು" ಅಂದೆ, "ಸ್...." ಅಂತ ತಲೆ ಮೇಲೆ ಕೈಯಿಂದ ಕುಟ್ಟಿಕೊಂಡವಳು, ಮಂತ್ರ ಮುಗಿಸಿ ಬಂದು ಹಲ್ಲು ಕಿರಿದಳು, "ಅಯ್ಯೊ... ಕೈಜಾರಿ ಸ್ವಲ್ಪ ಜಾಸ್ತಿ ಬಿದ್ದಿರಬೇಕು ರೀ..." ಅಂತ. ನಾ ನಗುತ್ತ ಮತ್ತೊಂದು ತುತ್ತಿಗೆ ಕೈ ಹಾಕುತ್ತಿದ್ದರೆ, ಬೇಡವೆಂದು ಕಸಿದುಕೊಂಡು ಪಾಕಶಾಲೆ ಸೇರಿದಳು, ನಾನೂ ಹಿಂಬಾಲಿಸಿದೆ "ಪರವಾಗಿಲ್ಲ ಕೊಡೆ ತಿಂತೀನಿ" ಅನ್ನುತ್ತ, ತಾನೂ ಸ್ವಲ್ಪ ಬಾಯಿಗಿಟ್ಟುಕೊಂಡು ರುಚಿ ನೋಡಿದವಳು, ಸಿಟ್ಟಿನಿಂದ ನೋಡಿ "ಅದ ಹೇಗೆ ತಿಂತೀರಾ, ಬಹಳ ಉಪ್ಪಾಗಿದೆ, ಬೀಪೀ ಜಾಸ್ತಿ ಆದರೆ ನನ್ನ ಮೇಲೆ ಹಾರಾಡ್ತೀರ.. ಎನೂ ಬೇಡ" ಅಂತ ತವೆ ಬಿಸಿ ಮಾಡಲಿಟ್ಟಳು, "ಬೇಗ ಬ್ರೆಡ ಟೋಸ್ಟ ಮಾಡಿ ಕೊಡ್ತೀನಿ ತಿಂದು ಹೋಗಿ" ಅಂತನ್ನುತ್ತ. "ಟೈಮಿದೆ ಬಿಡು ಇನ್ನೂ" ಅಂದು ಅಲ್ಲೇ ಇದ್ದ ಕಡಲೇಬೀಜ ನಾಲ್ಕು ತಿನ್ನುತ್ತ ಹೊರಬಂದೆ.

ಮತ್ತೆ ಡೈನಿಂಗ ಟೇಬಲ್ ಮೇಲೆ ಆಸೀನರಾದಾಗ ಮುಂದೆ ಬಿಸಿಬಿಸಿ ಟೋಸ್ಟಗಳಿದ್ದವು, ಅವಳು ಅಲ್ಲೇ ಚೇರು ಎಳೆದುಕೊಂಡು ಕುಳಿತಳು, "ನೀನು ತಿನ್ನಲ್ವಾ" ಅಂತ ಕೇಳಿದೆ, ಅಮೇಲೇ ಆ ಉಪ್ಪು ಉಪ್ಪಿಟ್ಟು ತಿನ್ನುವ ಪ್ಲಾನ ಏನಾದ್ರೂ ಮಾಡಿದ್ದಾಳೊ ಅಂತ ತಿಳಿದುಕೊಳ್ಳಲು, ಈ ಗೃಹಿಣಿಯರ ಮನೋಭಾವಗಳೇ ಹಾಗೆ, ಎಲ್ಲಿ ಹಾಳಾಗುತ್ತದೆ ಅಂತ ಉಪ್ಪಿದ್ದರೂ ತಿನ್ನಲು ನೋಡುತ್ತಾರೆ, ಆದರೆ ಅದು ತಿನ್ನಲು ಆಗಲ್ಲ ಅಂತ ಗೊತ್ತಾಗಿದ್ದರಿಂದ, ತನಗೂ ಟೊಸ್ಟ ಮಾಡಿಕೊಂಡಿದ್ದಳು, ಟೀ ಮಾಡಲಿಟ್ಟಿದ್ದೇನೆ,  ಅದರ ಜತೆ ತನಗೂ ಟೊಸ್ಟ ತರುತ್ತೇನೆ ಅಂತದದ್ದು, ಕೇಳಿ ಸುಮ್ಮನಾದೆ.

ಹಾಗೇ ತಿನ್ನುತ್ತಿದ್ದವ ಏನೊ ನೆನಪಾಗಿ ಸುಮ್ಮನೇ ನಕ್ಕೆ, ಇವಳು ಇನ್ಯಾವ ತಪ್ಪು ಮಾಡಿದೆನೊ ಈ ಸಾರಿ, ಅಂತ ಗಾಬರಿಯಾಗಿ "ಮತ್ತೆ ಏನಾಯ್ತು, ಸರಿ ಇಲ್ವಾ" ಕೇಳಿದ್ಲು. "ಉಪ್ಪು!! ನೆನಪಿದೇನಾ..." ಅಂದೆ, ಹುಬ್ಬು ಗಂಟಿಕ್ಕಿದವಳು ನೆನಪಾಗಿ "ಒಹ್ ಅದ ಹೇಗೆ ಮರೆಯೋಕಾಗುತ್ತೆ" ಅಂದ್ಲು, ಅದು ಮರೆಯೋಕಾಗದ ಘಟನೆಯೇ ಸರಿ.

ಆಗ ಮದುವೆಯಾದ ಹೊಸತು, ಮೊದಲ ಬಾರಿ ಅಡುಗೆ ಮಾಡಲು ಪಾಕಶಾಲೆಗೆ ಕಾಲಿಟ್ಟಿದ್ದಳು, ಸೊಸೆ ಮಾಡುವ ಊಟದ ರುಚಿ ನೊಡಲು ಮನೆಯೇ ಕಾದಿತ್ತು, ಅಮ್ಮನಿಗೆ ಅವಳೆಲ್ಲ ಮಾಡ್ತಾಳೆ ಇಲ್ಲಿ ಬಾ ಕೂರು ಅಂದರೂ, ಆಗಾಗ ಹೋಗಿ ತರಕಾರಿ ಹೆಚ್ಚಿ ಕೊಡಲೇ, ಖಾರ ಅಲ್ಲಿದೆ, ಮೆಣಸು ಇಲ್ಲಿದೆ ಅಂತ ಹೇಳಿಬರುತ್ತಿದ್ದಳು, ನನ್ನ ಮಗನಿಗೆ ಇನ್ನು ಅಡಿಗೆ ಮಾಡಿ ಹಾಕುವಳು ಇವಳೇ, ಹೇಗೆ ಮಾಡುತ್ತಾಳೊ, ಹಾಸ್ಟೆಲ್ಲು ಹೊಟೇಲು ಅಂತ ತಿಂದವನಿಗೆ ಮನೆ ಅಡಿಗೆ ಮಾಡಿಹಾಕುವಳು, ಸರಿ ಇಲ್ಲದಿದ್ದರೆ ಹೇಗೆ ಅಂತ ಆತಂಕ ಬೇರೆ. ಮೊದಲ ಸಲ ಎಲ್ಲಿ ಯಾವ ಡಬ್ಬಿ ಎಲ್ಲಿದೆ ಸಿಗಲಿಕ್ಕಿಲ್ಲ ಅಂತಲೂ ಇರಬಹುದು, ಕೇಳಲು ಸಂಕೋಚ ಮಾಡಿಕೊಂಡಾಳು ಅಂತ ಕೂಡ ಏನೋ. ನಾನೂ ಒಳ ಹೋಗಿ ನೋಡಿದೆ, ಮೊದಲ ಬಾರಿ ಅತ್ತೆ ಮನೆಯಲ್ಲಿ ಅಡಿಗೆ, ಏನನ್ನುತ್ತಾರೊ, ರುಚಿಯಾಗಿರದಿದ್ದರೆ! ಇವಳ ಕಣ್ಣುಗಳಲ್ಲೂ ಭಯ ಕಂಡಿತು, ಕಣ್ಣು ಮುಚ್ಚಿ ನಿಧಾನವಾಗಿ ತೆರೆದು, ಕಣ್ಣಲ್ಲೇ ಎನೂ ಹೆದರಬೇಡ ಎಲ್ಲ ಸರಿಯಾಗುತ್ತದೆ ಮಾಡು, ಅಂತ ಹೇಳಿ ಬಂದೆ.

ಚಟಪಟ ಸದ್ದು ಕೇಳಿತು, ಸಾರಿಗೆ ವಗ್ಗರಣೆ ಹಾಕುತ್ತಿದ್ದಳು, ಅಮ್ಮ ಹೋಗಿ, ಪೂರ್ತಿ ಮಾಡುವವರೆಗೂ ತಡೆದುಕೊಳ್ಳಲು ಆಗದೇ, ರುಚಿ ನೋಡಲು ಸ್ವಲ್ಪ ಸೌಟಿನಲ್ಲಿ ತೆಗೆದುಕೊಂಡು ಸರಕ್ಕೆಂದು ಹೀರಿದ ಸದ್ದು ಬಂತು, ಅಮ್ಮನ ಮುಖ ಕಪ್ಪಿಟ್ಟಿರಬೇಕು, ಇವಳು ಹೇಗಾಗಿದೆ? ಅಂತ ಕೇಳಿದಳು ಅಂತ ಕಾಣುತ್ತದೇ, ಅಮ್ಮ "ಉಪ್ಪು ಜಾಸ್ತಿಯಾಗಿದೆ" ಅಂತನ್ನುತ್ತಿದ್ದಂತೇ, ಇದಕ್ಕೇ ಕಾಯುತ್ತಿದ್ದರೇನೊ ಅನ್ನುವಂತೆ ಸೋದರ ಸಂಬಂಧಿಯೊಬ್ಬರು, "ಈಗೀನ ಹುಡುಗೀರಿಗೆ ಅಡಿಗೆ ಮಾಡ್ಲಿಕ್ಕೆ ಎಲ್ಲಿ ಬರ್ತದೆ, ಓದಿದ್ದೇವೆ ಅಂತ ಅಡಿಗೆ ಮನೆಗೆ ಕಾಲಿಟ್ಟಿರಲ್ಲ" ಅಂತ ಮೂದಲಿಸಿದರು, ಅಡುಗೆ ಮನೆ ನಮ್ಮ ಡಿಪಾರ್ಟಮೆಂಟ ಅಲ್ಲ ಅಂತ ಇರಬೇಕಾಗಿದ್ದವ ನಾನು, ಈ ಪರಿಸ್ಥಿತಿ ಕೈಮೀರುವ ಎಲ್ಲ ಲಕ್ಷಣ ಕಂಡು ಅಲ್ಲಿಗೆ ಧಾವಿಸಿದೆ. ಈ ಮನೆಗಳಲ್ಲಿ ಉಪ್ಪಿನಂಥ ಚಿಕ್ಕ ಚಿಕ್ಕ ವಿಷಯಗಳೊಂದಿಗೆ ಸಂಬಂಧಗಳಿಗೆ ಉಪ್ಪಿಗಿಂತ ಜಾಸ್ತಿ ಹುಳಿ ಹಿಂಡಲು ಕಾದಿರುತ್ತಾರೆ ಕೆಲವರು... ಅದಕ್ಕೇ ಜಾಗರೂಕರಾಗಿರಬೇಕು.

ನಮ್ಮ ಮನೆಯಲ್ಲಿ ಅಜ್ಜಿಗೆ ಬೀಪೀ ಜಾಸ್ತಿಯಾದ ಮೇಲೆ, ಅಪ್ಪ "ಎಲ್ರೂ ಉಪ್ಪು ಕಮ್ಮಿ ತಿಂದರೇ ಒಳ್ಳೇದು" ಅಂತ ಹೇಳಿ, ಅಮ್ಮನಿಗೆ ಕಮ್ಮಿ ಉಪ್ಪು ಹಾಕು ಎಲ್ರಿಗೂ ಹೊಂದಿಕೆಯಾಗುತ್ತದೆ ಅಂತ ಕಟ್ಟಪ್ಪಣೆ ಮಾಡಿದರು, ಅಮ್ಮನ ಕೈಯಡುಗೆ ಉಪ್ಪು ಕಮ್ಮಿಯಾದರೂ ರುಚಿಕಳೆದುಕೊಳ್ಳಲಿಲ್ಲ, ನಮಗೂ ಕಡಿಮೆ ಉಪ್ಪಿನ ಊಟ ಒಗ್ಗಿ ಹೋಯಿತು, ಊರಿಂದ ಬಂದ ಸೋದರಮಾವ, ಉಪ್ಪು ಖಾರ ಇಲ್ಲದೆ ಸಪ್ಪೆ ಊಟ ಏನು ತಿಂತೀರಿ ಅಂತ, ಉಪ್ಪು ಉದುರಿಸಿಕೊಂಡು, ಹಸಿ ಕೆಂಪುಖಾರ ನಂಜಿಕೊಂಡೇ ಊಟ ಮಾಡುತ್ತಿದ್ದುದು ನಮ್ಮಲ್ಲಿ. ಹೀಗೆ ನಮ್ಮ ಮನೆಯಲ್ಲಿ ಉಪ್ಪಿನ ಉಪಯೋಗ ಕಮ್ಮಿಯಾಗಿತ್ತು, ಹೀಗಾಗಿ ಅವಳು ಸರಿ ಪ್ರಮಾಣ ಹಾಕಿದ್ದರೂ ಜಾಸ್ತಿ ಅಂತ ಅಮ್ಮನಿಗೆ ಅನಿಸಿದ್ದರೆ ಅಚ್ಚರಿಯಿರಲಿಲ್ಲ.

ಆ ಮೂದಲಿಸಿದ ಸಂಬಂಧಿಗೆ, ಇದೆಲ್ಲ ನಮ್ಮನೆಯಲ್ಲಿ ನಿನ್ನಾಟ ನಡೆಯಲ್ಲ ಅಂತ ತಿಳುವಳಿಕೆ ಬರುವಂತೆ "ಮೊದಲ ಸಲ ಅಲ್ವಾ, ಏನೊ ಮಿಸ್ಟೇಕು ಆಗುತ್ತದೆ, ಅಲ್ದೇ ನಮ್ಮನೇಲಿ ಉಪ್ಪು ಕಮ್ಮಿ ಉಪಯೋಗಿಸ್ತೀವಿ ಅಮ್ಮನಿಗೆ ಅದು ಗೊತ್ತಿದೆ" ಅಂತ ಮಧ್ಯಪ್ರವೇಶಿಸಿದೆ ಅಮ್ಮನ ಕಣ್ಣಿನಲ್ಲಿ ನೋಡುತ್ತ... "ಹೌದು, ಹೌದು ನಮ್ಮನೇಲಿ ಅಡಿಗೆಗೆ ಉಪ್ಪು ಕಮ್ಮಿ" ಅಮ್ಮ ಅಂತ ಅನುಮೋದಿಸಿದಳು. ಇವಳ ಹಣೆಯಲ್ಲಿ ಬೆವರು ಹನಿ ಮೂಡಿದ್ದವು ಭೀತಿಯಿಂದ, ಸೌಟು ಇಸಿದುಕೊಂಡು ಸ್ವಲ್ಪ ಕೈಯಲ್ಲಿ ಸಾರು ಹಾಕಿಕೊಂಡು ಆರಿಸಲು ಊದುತ್ತ... ಅವಳ ಹಣೆಗೂ ಸ್ವಲ್ಪ ಊದಿದೆ ಬೆವರ ಹನಿ ಹೋಗಲಾಡಿಸಲು... ರುಚಿ ನೋಡಿದೆ, ನಿಜವಾಗಲೂ ಉಪ್ಪು ಸ್ವಲ್ಪ ಜಾಸ್ತಿಯಾಗಿತ್ತು, ಅವಳಿಗೂ ಕೈಯಲ್ಲಿ ಹಾಕಿದೆ ರುಚಿ ನೋಡಿದವಳು, ನನ್ನಡೆಗೆ ಮುಂದೇನು ಅನ್ನುವಂತೆ ನೋಡಿದಳು, ನೋಟದಲ್ಲೇ ನೋ ಪ್ರಾಬ್ಲಂ ಅನ್ನುವಂತೆ ನಸುನಕ್ಕೆ.

ಎಲ್ಲೋ ಓದಿದ್ದ ಟಿಪ್ಸ ನೆನಪಿತ್ತು, ಅಮ್ಮನ ಹೊರಕಳಿಸಿ, ಟೀವೀ ನೋಡಹೋಗು ಅಂತಂದು, ಆಲೂಗಡ್ಡೆ(ಬಟಾಟಿ, ಪೊಟ್ಯಾಟೊ) ಕೊಡು ಅಂದೆ ನನ್ನಾಕೆಗೆ, ಹತ್ತುವರ್ಷ ಹೊರಗೇ ತಿಂದವನಿಗೇನು ಗೊತ್ತಿರಬಹುದು ಅನ್ನುವ ಅನುಮಾನದಲ್ಲೇ ತಂದುಕೊಟ್ಟಳು, ಚೆನ್ನಾಗಿ ತೊಳೆದು ಎರಡು ಹೋಳು ಮಾಡಿ, ಸಾರಿನಲ್ಲಿ ಮುಳುಗಿಸಿದೆ, ಒಂದು ಹದಿನೈದು ನಿಮಿಷ ಹಾಗೇ ಇರಲಿ ಹೆಚ್ಚಿನ ಉಪ್ಪು ಹೀರಿಕೊಳ್ಳುತ್ತವೆ, ಆಮೇಲೆ ಅವನ್ನ ತೆಗೆದುಹಾಕಿ, ಸ್ವಲ್ಪ ಚಿಟಿಕೆ ಬೆಲ್ಲ ಹಾಕಿ ಕುದಿಸಿಬಿಡು. ಊಟಕ್ಕೆ ನೀಡುವಾಗ, ತುಪ್ಪ ಹಾಕಿ ನೀಡು ಎಲ್ಲ ಸರಿ ಹೋಗುತ್ತದೆ ಅಂದೆ. ಅವಳ ಸೆರಗು ತೆಗೆದುಕೊಂಡು ಅವಳ ಹಣೆಗೆ ಒತ್ತಿದೆ, ಸ್ವಲ್ಪ ನಿರಾಳವಾದಳು... ಹೇಳಿದಂತೇ ಮಾಡಿದಳು, ಅಪ್ಪ ಎರಡನೇ ಬಾರಿ ಅನ್ನ ಹಾಕಿಸಿಕೊಂಡಾಗಲೇ ಗೊತ್ತಾಯ್ತು, ಇಷ್ಟವಾಗಿದೆ ಎಂದು. ಅಮ್ಮನ ಮುಖದಲ್ಲಿ ಲಾಸ್ಯ ಮನೆ ಮಾಡಿತ್ತು, ಉಪ್ಪಿನ ತಪ್ಪಾದರೂ ಮನೆ ಒಪ್ಪ ಓರಣವಾಗಿತ್ತು. ಅಮ್ಮ ಬಂದು ಏನೋ ಮಾಡಿದೆ ಅಂತ ಕೇಳುತ್ತಲೇ ಇದ್ದಳು, ಎಲ್ಲ ನಿನ್ನ ಸೊಸೆಯ ಮ್ಯಾಜಿಕ ಅನ್ನುತ್ತಿದ್ದೆ. ಅದರೊಂದಿಗೆ, **ತಪ್ಪು ತಪ್ಪೇ, ಆದರೆ ತಪ್ಪು ತಿದ್ದಬಹುದು ಕೂಡ, ತಪ್ಪನ್ನೇ ದೊಡ್ಡದು ಮಾಡಿದರೆ ಅದೇ ದೊಡ್ಡ ತಪ್ಪು. ಈ ಮನೆಗೆ ಯಾರು ಹುಳಿ ಹಿಂಡಲು ಬಂದರೂ ಅಷ್ಟೇ ಏನೂ ಆಗದು, ಸಿಹಿ ಸಿಂಚನಗೈಯ್ಯಲಾಗದಿರಬಹುದು, ಆದ್ರೆ ಹುಳಿಯನ್ನಂತೂ ಇಂಗಿಸಿಕೊಳ್ಳುತ್ತೇವೆ** ಅನ್ನುವ ಒಂದು ಸಂದೇಶ ಮನೆಯಲ್ಲಿ ಎಲ್ಲರಿಗೂ ರವಾನೆಯಾಗಿತ್ತು.

ಆದದ್ದನ್ನೆಲ್ಲ ಅಮ್ಮನಿಗೆ ಇವಳು ಹೇಳಿ, ಅಮ್ಮನ ಹೆಮ್ಮೆಯ ಮಗನನ್ನಾಗಿಸಿದಳು, ಎಷ್ಟೊ ಬಾರಿ ಅದನ್ನು ಪ್ರಸ್ತಾಪಿಸಿ ನಕ್ಕಿದ್ದೇವೆ, ಅಮ್ಮನ ಹತ್ತಿರ ಇವಳು ಇನ್ನೂ ಅಡುಗೆಯಲ್ಲಿ ಪಳಗಿದ್ದಾಳೆ, ಆ ಹುಳಿ ಸಾರಿನ ಪ್ರಸಂಗ ಇನ್ನೂ ನೆನಪಿದೆ, ಆ ನೆನಪು ಮಾತ್ರ ಸಿಹಿ ಸವಿ ನೆನಪಿನಂತೆ.

ಉಪ್ಪಿಗಿಂತ ರುಚಿಯಿಲ್ಲ ತಾಯಿಗಿಂತ ಬಂಧುವಿಲ್ಲ ಅಂತ ಸುಮ್ನೇ ಗಾದೆ ಬಂದಿದ್ದಾ, ಉಪ್ಪು ಹೆಚ್ಚಾದರೂ ತಪ್ಪೇ, ಕಡಿಮೆಯಾದರೂ ತಪ್ಪೇ, ಪ್ರಮಾಣಕ್ಕೆ ತಕ್ಕದಾಗಿದ್ದರೆ ಮಾತ್ರ ರುಚಿ, ಉಪ್ಪು ಜಾಸ್ತಿ ಆಗಿದೆ ಅಂತ ಬೀಪೀ ಏರಿಸಿಕೊಂಡು ಎಷ್ಟು ಮನೆಗಳಲ್ಲಿ ಜಗಳವಾಗಿಲ್ಲ, ಅದಕ್ಕೇ ರಾತ್ರಿ ಉಪ್ಪು ಕೇಳಬಾರದು ಮನೆಯಲ್ಲಿ ಜಗಳವಾಗುತ್ತದೆ ಅಂತ ಮೂಢನಂಬಿಕೆ ಬಂದಿದ್ದೇನೊ. ಅಂತೂ ಉಪ್ಪು ಮಾತ್ರ ಅಡಿಗೆಗೆ ಬೇಕೇ ಬೇಕು. ಉಪ್ಪಿನ ಸೇವನೆಯಿಂದ ಬೀಪೀ ಜಾಸ್ತಿ ಆಗುತ್ತದೆ ಅಂತ ವೈಜ್ಞಾನಿಕ ಕಾರಣವೇನೊ ಇದೆ ಆದರೆ ಉಪ್ಪು ಜಾಸ್ತಿ ಆದದ್ದಕ್ಕೇ, ಇನ್ನೂ ತಿನ್ನುವ ಮೊದಲೇ ಬೀಪೀ ಜಾಸ್ತಿ ಮಾಡಿಕೊಂಡು ಉಪ್ಪಿನ ಮೇಲೆ ಉರಿದುಬೀಳುವವರನ್ನು ನೋಡಿದ್ದೇನೆ. ಈ ಕ್ಷಣಿಕ ಆವೇಶ ತರವಲ್ಲ, ಉಪ್ಪಿನಂಥ ಚಿಕ್ಕ ಚಿಕ್ಕ ವಿಷಯಗಳೇ ದೊಡ್ಡ ಕಂದಕಗಳನ್ನು ಸೃಷ್ಟಿಸಬಹುದು, ಸ್ವಲ್ಪ ಸಹನೆ ಇದ್ದರೆ ಸಾಕು, ನನ್ನನ್ನೂ ಸೇರಿಸಿಕೊಂಡು ಹೇಳುತ್ತಿರುವುದು, ನನಗಿದೆ ಬೇರೆಯವರಿಗೆ ಇಲ್ಲ ಅಂತಲ್ಲ. ಹಾಗಂತ ಉಪ್ಪು ಜಾಸ್ತಿಯಿದ್ದರೂ ತಿನ್ನಿ ಅಂತಲ್ಲ, ರಕ್ತದೊತ್ತಡ(ಬೀಪೀ) ಜಾಸ್ತಿ ಆಗಿ ಹೃದಯದ ಖಾಯಿಲೆಗಳು ಬಂದಾವು ಉಪ್ಪು ಸ್ವಲ್ಪ ಕಡಿಮೆ ಮಾಡಿ, ಅತ್ತ ಬಿಟ್ಟು ಬಿಟ್ಟರೆ ಐಯೋಡಿನ ಕೊರತೆಯಾದೀತು, ಅದಕ್ಕೆ ರುಚಿಗೆ ಹಿತ ಮಿತಕ್ಕೆ ತಕ್ಕಷ್ಟು ಇರಲಿ, ಆಗ ಜೀವನ ನಳಪಾಕವಾಗುತ್ತದೆ.

ಆ ಘಟನೆಯ ಮರು ಉಲ್ಲೇಖ ಇವಳ ಮೊಗದಲ್ಲಿ ನಗು ತಂದಿತ್ತು "ರೀ, ಉಪ್ಪಿಟ್ಟಿಗೂ ಏನಾದ್ರೂ ಐಡಿಯಾ ಇದೇನಾ" ಪ್ರಶ್ನಿಸಿದಳು, "ನಾನೇನು ಅಡುಗೆಭಟ್ಟ ಅನ್ಕೊಂಡಿದೀಯಾ" ಅಂದೆ. "ಮತ್ತೆ ಆಗ ಹೇಗೆ ಆ ಐಡಿಯಾ ಸಿಕ್ಕಿತ್ತು" ಅಂದ್ಲು. "ಎಲ್ಲೊ ಓದಿದ ನೆನಪಿತ್ತು, ಮತ್ತೆ ಈಗ ಏನ್ಮಾಡ್ತೀಯಾ" ಅಂದೆ. "ನಳ ಮಹರಾಜರೇ, ಪಾಕಶಾಲೆ ನಮಗೆ ಬಿಟ್ಟು, ನಿಮ್ಮ ಕಂಪ್ಯೂಟರ ಕುಟ್ಟಲು ಜಾಗ ಖಾಲಿ ಮಾಡಿ" ಅಂದಾಗಲೇ ಆಫೀಸಿನ ನೆನಪಾಯಿತು, "ಅಮ್ಮನಿಗೆ ಗೊತ್ತಿದ್ರೆ ಕೇಳು" ಅನ್ನುತ್ತ ಎದ್ದೆ, ಹಳೆ ನೆನಪಿನೊಂದಿಗೆ ಹರಟೆ ಹೊಡೆದರಾಯ್ತು ಅದನ್ನ ಕೇಳುವ ನೆಪದಲ್ಲಿ ಅಂತ, ಅಮ್ಮನಿಗೆ ಫೋನು ಮಾಡಲು ನಡೆದಳು. ಮತ್ತೆ ನನ್ನಾಕೆಯೊಂದಿಗೆ, ಉಪ್ಪು ಜಾಸ್ತಿಯಾದರೆ, ಸಕ್ಕರೆ ಹಾಕಿ, ಸಿಹಿಯಾದರೆ, ಖಾರ ಹಾಕಿ ಮತ್ತೆ ಇಂಥದ್ದೇ ಖಾರಾಬಾಥ... ಅಲ್ಲಲ್ಲ ಖಾಸಭಾತಗಳೊಂದಿಗೆ ಸಿಕ್ತೀನಿ

ಇಷ್ಟೊತ್ತು ಓದಿದ್ದು ಇಷ್ಟಾ ಆದ್ರೆ ಮೆಚ್ಚಿ, ಸಿಟ್ಟು ಬಂದಿದ್ರೆ ಚುಚ್ಚಿ ಇಂಚೆ (ಇ–ಅಂಚೆ) ಹಾಕಿ... ನನ್ನ ವಿಳಾಸ pm@telprabhu.com . ಹೀಗೆ ನೀವು ಓದಿ ಖುಶಿಯಾಗಿದ್ರೆ ನಿಮ್ಮ ಗೆಳೆಯರಿಗೂ ಇದನ್ನ ಕಳಿಸಿ, ಸಂತೋಷ ಇರೋದೇ ಹಂಚೋಕೆ ತಾನೆ...